***ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕ : 04.12.2025***

***<u>ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಸಾಕ್ಷಿಯನ್ನು ಪುನಃ ಕರೆಯಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು.</u>***

***<u>ಪಾಟೀ ಸವಾಲುಃ 2 ನೇ ಆರೋಪಿ ಪರ ವಕೀಲರಿಂದಃ</u>***

*1. ಪೋಲೀಸರು ಈ ಆರೋಪಿ ಅಂಗಡಿಯಲ್ಲಿ ಕಳ್ಳತನ ಮಾಡಿರುತ್ತಾರೆ ಎಂದು ತಿಳಿಸಿರುತ್ತಾರೆ. ಪೋಲೀಸರು ತಿಳಿಸಿದ ಆಧಾರದ ಮೇಲೆ ನೀವು ಆರೋಪಿಯನ್ನು ತಿಳಿದುಕೊಂಡಿರುತ್ತೀರ ಎಂದರೆ ಸರಿ. ಆರೋಪಿಯನ್ನು ಪೋಲೀಸರು ತೋರಿಸುವ ಮೊದಲು ಎಲ್ಲಿಯೂ ನೋಡಿಲ್ಲ. ಪೋಲೀಸ್ ಠಾಣೆಗೆ ಈ ಪ್ರಕರಣಕ್ಕೆ ಸಂಬಂಧಿಸಿಕಂತೆ 2, 3 ಬಾರಿ ಹೋಗಿದ್ದೇನೆ. ಪೋಲೀಸ್ ಠಾಣೆಯಲ್ಲಿ ಎಫ್.ಐ.ಆರ್ ಪಡೆದುಕೊಂಡಾಗ ಸಹಿ ಮಾಡಿರುತ್ತೇನೆ. ದಿಃ 12.05.2011 ರಂದು ಪೊಲೀಸರು ಸ್ಥಳ ಪಂಚನಾಮೆ ಮಾಡಲು ಅಂಗಡಿ ಬಳಿ ಬಂದಿದ್ದರು. ನಿಪಿ. 2 ಮಾಡುವಾಗ ಎದುರುಗಡೆ ಅಂಗಡಿಯ, ಸೋಮಶೇಖರ್ ಮತ್ತು ರಾಜೇಶ್ ಎಂಬುವರು ಇದ್ದರು. ಇವರುಗಳೇ ನಿಪಿ. 2 ಕ್ಕೆ ಸಹಿ ಮಾಡಿರುತ್ತಾರೆ. ನಿಪಿ.2 ನ್ನು ಸ್ಥಳದಲ್ಲಿ ಮಾಡಿಲ್ಲ ಎಂದರೆ ಸರಿಯಲ್ಲ. ನಿಪಿ.2 ಕ್ಕೆ ಠಾಣೆಯಲ್ಲಿ ಸಹಿ ಮಾಡಿರುತ್ತೀರ ಎಂದರೆ ಸರಿಯಲ್ಲ. ಆರೋಪಿಗೂ ಇದ್ದಕ್ಕೂ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರ ಎಂದರೆ ಸರಿಯಲ್ಲ.*

***<u>ಮರು ವಿಚಾರಣೆ ಇಲ್ಲ.</u>***

***ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗೊಳಿಸಲಾಯಿತು.***

***ಓ ಹೇ ಕೇ ಸ ಇ ಒ***

***ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು***
***ಮತ್ತು ಜೆ.ಎಂ.ಎಫ್.ಸಿ., ಪಾಂಡವಪುರ.***